**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

**ಸಂಖ್ಯೆ:ಸಿ4(5)ವಿ.ಶಿ.ಜೇಷ್ಠತೆ.ಮಾ.ಇತರೆ02/2016–17** **ದಿನಾಂಕ:29.08.2016**

**ಅಧಿಸೂಚನೆ**

**ವಿಷಯ:** 01/01/2016ರಲ್ಲಿದ್ದಂತೆ ಸರ್ಕಾರಿ ಪ್ರೌಢಶಾಲಾ ಗ್ರೇಡ್–1 ಮತ್ತು ಗ್ರೇಡ್–2 ಸಂಗೀತ, ನೃತ್ಯ, ನಾಟಕ ಶಿಕ್ಷಕರುಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿ.ಪಿ.ಎ.ಆರ್.59 ಎಸ್.ಆರ್.ಇ.2002 ದಿನಾಂಕ:24–06–2003.

2. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು:1957 ನಿಯಮ–10ರಂತೆ

********

ಮೇಲಿನ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಪ್ರೌಢಶಾಲಾ ಗ್ರೇಡ್–1 ಮತ್ತು ಗ್ರೇಡ್–2 ಸಂಗೀತ, ನೃತ್ಯ ನಾಟಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ, ದಿನಾಂಕ:01/01/2001 ರಿಂದ ದಿನಾಂಕ:01/01/2016 ರವರೆಗೆ ನೇಮಕಾತಿ/ನೇರನೇಮಕಾತಿ/ಬಡ್ತಿ/ವರ್ಗಾವಣೆ ಪಡೆದು ಜಿಲ್ಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ಪ್ರೌಢಶಾಲಾ ಗ್ರೇಡ್–1 ಮತ್ತು ಗ್ರೇಡ್–2 ಸಂಗೀತ, ನೃತ್ಯ ನಾಟಕ ಶಿಕ್ಷಣ ಶಿಕ್ಷಕರುಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು 1957ರ ನಿಯಮ–10 ರಂತೆ ಸಿದ್ಧಪಡಿಸಿ, ಆಯಾ ಜಿಲ್ಲೆಗಳಲ್ಲಿನ ಉಪನಿರ್ದೇಶಕರು. ಈ ಕಛೇರಿಗೆ ಮಾಹಿತಿ ಸಲ್ಲಿಸಿರುವುದನ್ನು ಪರಿಶೀಲಿಸಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಈ ಸಂಬಂಧ ಶಿಕ್ಷಕರುಗಳು ದಿನಾಂಕ:30/09/2016 ರವರೆಗೆ ಆಕ್ಷೇಪಣೆ ಸಲ್ಲಿಸಲು 30 ದಿನಗಳ ಕಾಲಾವಕಾಶವನ್ನು ನೀಡಿದೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ಇಲಾಖಾ ವೆಬ್ ಸೈಟ್‌ನಲ್ಲಿ (www.schooleducation.kar.nic.in) ಜೇಷ್ಠತಾ ಪಟ್ಟಿಯನ್ನು ಪಡೆದುಕೊಂಡು ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ತಮ್ಮ ಕಛೇರಿಯ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸೂಚನಾ ಫಲಕದಲ್ಲಿ ಪ್ರಕಟಿಸಿ ಮತ್ತು ಜಿಲ್ಲೆಯ ಸ್ಥಳೀಯ ದಿನ ಪತ್ರಿಕೆಗಳಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯಿಂದ ಬಾಧಿತರಾಗಬಹುದಾದಂತಹ ಶಿಕ್ಷಕರುಗಳಿಂದ ಆಕ್ಷೇಪಣೆಗಳನ್ನು ಸಲ್ಲಿಸುವ ಬಗ್ಗೆ ಪ್ರಕಟಿಸಿ ವ್ಯಾಪಕ ಪ್ರಚಾರ ನೀಡಲು ತಿಳಿಸಿದೆ. ನಂತರ ಶಿಕ್ಷಕರಿಂದ ಬರುವಂತಹ ಆಕ್ಷೇಪಣೆಗಳನ್ನು ಜಿಲ್ಲಾ ವ್ಯಾಪ್ತಿಯಲ್ಲಿ ಪಡೆದು ಕ್ರೋಢೀಕರಿಸಿ ಈ ಕಛೇರಿಗೆ ಕೆಳಕಂಡ ನಿರ್ದೇಶನವನ್ನು ಗಮನದಲ್ಲಿಟ್ಟುಕೊಂಡು ಸಲ್ಲಿಸಲು ತಿಳಿಸಿದೆ.

1. ಸಂಬಂಧಪಟ್ಟ ಉಪನಿರ್ದೇಶಕರುಗಳು ತಮ್ಮ ವ್ಯಾಪ್ತಿಯಲ್ಲಿನ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ವಿಳಾಸದಲ್ಲಿ ಶಾಲೆಯ ಹೆಸರು, ಸ್ಥಳ, ತಾಲ್ಲೋಕ್ ಮತ್ತು ಜಿಲ್ಲೆಯ ಮಾಹಿತಿಯನ್ನು ಕಡ್ಡಾಯವಾಗಿ ನಮೂದಿಸಲು ತಿಳಿಸಿದೆ. ಮಾಹಿತಿಯನ್ನು ಎಕ್ಸೆಲ್(excel) ತಂತ್ರಾಂಶದ ನುಡಿ–01 ರಲ್ಲಿ ಗಣಕೀಕರಿಸಿ ಆಯಾ ಜಿಲ್ಲೆಯ ಉಪನಿರ್ದೇಶಕರ ಕಛೇರಿ ವಿಷಯ ನಿರ್ವಾಹಕರೇ ಖುದ್ದು ಆಯುಕ್ತಾಲಯಕ್ಕೆ ಸಲ್ಲಿಸುವುದು.
2. ಈಗಾಗಲೇ ತಾತ್ಕಾಲಿಕ ಜೇಷ್ಠತಾ ಪಟ್ಟಿ ಪ್ರಕಟಿಸಿರುವ ಸರ್ಕಾರಿ ಪ್ರೌಢಶಾಲಾ ಗ್ರೇಡ್–1 ಮತ್ತು ಗ್ರೇಡ್–2 ಸಂಗೀತ, ನೃತ್ಯ ನಾಟಕ ಶಿಕ್ಷಕರುಗಳ ಜೇಷ್ಠತಾ ಪಟ್ಟಿಯ ನಮೂನೆಯಲ್ಲಿ ಆಕ್ಷೇಪಣೆಗಳನ್ನು ಗಣಕೀಕರಿಸಿ ಉಪನಿರ್ದೇಶಕರ ದೃಢೀಕರಣದೊಂದಿಗೆ ಸಲ್ಲಿಸುವುದು.
3. ಪ್ರಸ್ತುತ ಉಪನಿರ್ದೇಶಕರು ಸಲ್ಲಿಸಿರುವ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ತಯಾರಿಸುವ ಸಂದರ್ಭದಲ್ಲಿ ಕೆಳಕಂಡ ಮಾಹಿತಿಗಳು ಅಪೂರ್ಣವಾಗಿದ್ದರು ಸಹ ತಮ್ಮ ಕಛೇರಿ ವ್ಯಾಪ್ತಿಯಲ್ಲಿ ಪರಿಶೀಲಿಸದೇ ಅಪೂರ್ಣ ಮಾಹಿತಿ ಸಲ್ಲಿಸಿರುವಂತಹ ಕಛೇರಿ ವ್ಯಾಪ್ತಿಯವರು ಈ ಕೆಳಕಂಡ ಅಂಶಗಳನ್ನು
   1. ಸೇವೆಗೆ ಸೇರಿದ ದಿನಾಂಕ 2. ಶಿಕ್ಷಕರ ವಿಳಾಸ 3. ಜನ್ಮ ದಿನಾಂಕ, 4. ಗ್ರೇಡ್–1 ಹುದ್ದೆಗೆ ಬಂದ ದಿನಾಂಕವನ್ನು ಪರಿಶೀಲಿಸಿಕೊಂಡು, ಜೇಷ್ಠತಾ ಪಟ್ಟಿ ಆಕ್ಷೇಪಣೆಗಳನ್ನು ಸರಿಪಡಿಸಿ ಸಲ್ಲಿಸುವುದು.
4. ಮೇಲ್ಕಂಡ ಅವಧಿಯಲ್ಲಿ ಶಿಕ್ಷಕರುಗಳು ಅಂತರ ವಿಭಾಗ ವರ್ಗಾವಣೆಯಾಗಿ ಬಂದರೆ ಜೇಷ್ಠತೆಯಲ್ಲಿ ಕಿರಿಯರಾಗುವುದರಿಂದ ಅಂತವರನ್ನು ಜೇಷ್ಠತಾ ಪಟ್ಟಿಯಲ್ಲಿ ಕೆಳ ಭಾಗದಲ್ಲಿ ನಮೂದಿಸಿ ಸಲ್ಲಿಸುವುದು.

5. ದಿನಾಂಕ:30/09/2016ರ ನಂತರ ಬಂದ ಆಕ್ಷೇಪಣೆಗಳನ್ನು ಸ್ವೀಕರಿಸುವುದಿಲ್ಲ. ಆದ್ದರಿಂದ ಅತೀ ಜರೂರಾಗಿ ಈ ಕಛೇರಿಗೆ ಹಾರ್ಡ್ ಮತ್ತು ಸಾಫ್ಟ್ ಕಾಪಿಯನ್ನು ಸಲ್ಲಿಸುವಂತೆ ತಿಳಿಸಿದೆ.
6. ಹೈದ್ರಬಾದ್-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ 371ಜೆ ಪ್ರಕಾರ ಶಿಕ್ಷಕರು ನಿಗಧಿತ ನಮೂನೆಯಲ್ಲಿ ಸಲ್ಲಿಸಿದ್ದರೆ ಅದನ್ನು ಎಲ್.ಸಿ ಮತ್ತು ಆರ್.ಪಿ.ಸಿ ಪಟ್ಟಿಯನ್ನು ತಯಾರಿಸಿ ಅದನ್ನು ಸಹ ಹಾರ್ಡ್ ಮತ್ತು ಸಾಫ್ಟ್ ಕಾಪಿಯನ್ನು ಸಲ್ಲಿಸುವಂತೆ ತಿಳಿಸಿದೆ.
7. ರಾಜ್ಯದ ಉಪನಿರ್ದೇಶಕರಿಂದ ಮಾಹಿತಿ ಸ್ವೀಕೃತಗೊಂಡ 30 ದಿನಗಳೊಳಗೆ ಅಂತಿಮವಾಗಿ ಪ್ರಕಟಿಸಲಾಗುವುದು. ಮತ್ತು ಅಂತಿಮವಾಗಿ ಪ್ರಕಟವಾದ ನಂತರ ಯಾವುದೇ ಬದಲಾಣೆ ಮಾಡಲು ಅವಕಾಶವಿರುವುದಿಲ್ಲ ಆದ್ದರಿಂದ ಬಾಧಿತ ಶಿಕ್ಷಕರುಗಳಿಂದ ಸರಿಯಾದ ಸಂಪೂರ್ಣವಾದ ನಿಖರ ಮಾಹಿತಿಯನ್ನು ಪಡೆದು ಸಲ್ಲಿಸಲು ತಿಳಿಸಿದೆ.
8. ಮೇಲ್ಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ನಿಖರವಾದ ಮಾಹಿತಿಯನ್ನು ಆಯುಕ್ತಾಲಯಕ್ಕೆ ನೇರವಾಗಿ ಸಲ್ಲಿಸುವುದು, ಸಲ್ಲಿಸದೇ ಇದ್ದ ಪಕ್ಷದಲ್ಲಿ ಉಪನಿರ್ದೇಶಕರನ್ನೆ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕ್ಕೆ ಮಾನ್ಯ ಆಯುಕ್ತರಿಗೆ ಮತ್ತು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

Kulound

ನಿರ್ದೇಶಕರು(ಪ್ರೌಢಶಿಕ್ಷಣ)

ಇವರಿಗೆ,

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲಬರ್ಗಾ ಜಿಲ್ಲೆ
2. ರಾಜ್ಯದ ವಿಭಾಗೀಯ ಸಹ ನಿರ್ದೇಶಕರು ಬೆಂಗಳೂರು/ಮೈಸೂರು/ಕಲಬುರಗಿ/ಬೆಳಗಾವಿ ರವರಿಗೆ.
3. ವಿಶೇಷಾಧಿಕಾರಿಗಳು ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ.ರಸ್ತೆ, ಬೆಂಗಳೂರು.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಇವರಿಗೆ ಅಗತ್ಯ ಕ್ರಮಕ್ಕಾಗಿ.
5. ಹಿರಿಯ ಸಹಾಯಕ ನಿರ್ದೇಶಕರು, ಸಿಬ್ಬಂದಿ ಶಾಖೆ [EST-1] ವಿಭಾಗ, ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಮಾಹಿತಿಗಾಗಿ.
6. ಅಧ್ಯಕ್ಷರು, ಅಖಿಲ ಕರ್ನಾಟಕ ಸಂಗೀತ ಶಿಕ್ಷಕರ ಸಂಘ(ರಿ), ಸರ್.ಎಂ.ವಿ.ಲೇಔಟ್, 6ನೇ ಬ್ಲಾಕ್, ಅಂಚೆ ಕಛೇರಿ ಹಿಂಭಾಗ, ಉಲ್ಲಾಳ ಉಪನಗರ, ಬೆಂಗಳೂರು.
7. ಅಧ್ಯಕ್ಷರು, ಅಖಿಲ ಕರ್ನಾಟಕ ನೃತ್ಯ ಮತ್ತು ನಾಟಕ ಶಿಕ್ಷಕರ ಸಂಘ(ರಿ), ಬೆಂಗಳೂರು.
8. ಕಛೇರಿ ಪ್ರತಿ.